## ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರ ಹೆಸರು** : ಶ್ರೀ ಎನ್.ನಾಗರಾಜು (ಎಂ.ಟಿ.ಬಿ.) (ವಿಧಾನಸಭಾ ಕ್ಷೇತ್ರ)

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 479(472)

**ವಿಷಯ** : ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಉತ್ತರಿಸಬೇಕಾದ ದಿನಾಂಕ** : 30.01.2026

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ ಸರ್ಕಾರದಿಂದ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; ದುರಸ್ಥಿಯಲ್ಲಿರುವ/ಮುಚ್ಚಿ ಹೋಗಿರುವ ಘಟಕಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು); | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ ಒಟ್ಟು 770 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಇವುಗಳಲ್ಲಿ147 ಘಟಕಗಳುನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವತಿಯಿಂದ ಹಾಗೂ 623 ಘಟಕಗಳುನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ, ಸಹಕಾರ ಸಂಸ್ಥೆಗಳು, ಇತರೆ ಖಾಸಗಿ ಸಂಸ್ಥೆಗಳಿಂದ ಮತ್ತು ಗ್ರಾಮ ಪಂಚಾಯಿತಿ ವತಿಯಿಂದ ನಿರ್ಮಾಣ ಮಾಡಲಾಗಿರುತ್ತದೆ. ದುರಸ್ಥಿಯಲ್ಲಿರುವ ಘಟಕಗಳ ವಿವರಗಳು ಈ ಕೆಳಕಂಡತಿವೆ. (ಕೆಳಗಿನ ಪಟ್ಟಿ ನೋಡಿ) |
| ಆ) | ಹಾಗಿದ್ದಲ್ಲಿ, ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಅಂತಹ ಯಾವುದೇ ಪ್ರಕರಣಗಳು ಕಂಡು ಬಂದಿರುವುದಿಲ್ಲ.ಆದರೆ 11 ಘಟಕಗಳು ದುರಸ್ಥಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |

| ಕ್ರ. ಸಂ | ತಾಲ್ಲೂಕು | ಒಟ್ಟು ಘಟಕಗಳ ಸಂಖ್ಯೆ | ದುರಸ್ಥಿಯಲ್ಲಿರುವ ಘಟಕಗಳ ಸಂಖ್ಯೆ |
|---|---|---|---|
| 1 | ದೇವನಹಳ್ಳಿ | 116 | ಎಲ್ಲಾ ಘಟಕಗಳು ಚಾಲ್ತಿಯಲ್ಲಿವೆ |
| 2 | ದೊಡ್ಡಬಳ್ಳಾಪುರ | 245 | 4 |
| 3 | ಹೊಸಕೋಟೆ | 305 | 5 |
| 4 | ನೆಲಮಂಗಲ | 104 | 2 |
| **ಒಟ್ಟು** | | **770** | **11** |

| | | |
|---|---|---|
| ಇ) | ಸಮರ್ಪಕವಾಗಿ ನಿರ್ವಹಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಶುದ್ದ ಕುಡಿಯುವ ನೀರಿನ ಘಟಕಗಳನ್ನು ನಿರ್ವಹಿಸಲು ಟೆಂಡರ್ ಮೂಲಕ ಕಾರ್ಯಾಚರಣೆ ಮತ್ತು ನಿರ್ವಹಣಾ ಏಜೆನ್ಸಿ/ಸಂಸ್ಥೆಯನ್ನು ನೇಮಿಸಲಾಗಿದ್ದು, ಸಮರ್ಪಕ ನೀರು ಪೂರೈಕೆಗೆ ಕ್ರಮವಹಿಸಲಾಗುತ್ತಿದೆ. ಮುಂದುವರೆದು, ಗ್ರಾಮ ಪಂಚಾಯತ್‌ಗೆ ಹಸ್ತಾಂತರಗೊಂಡ ಘಟಕಗಳನ್ನು ಗ್ರಾಮ ಪಂಚಾಯತ್ ವತಿಯಿಂದಲೇ ನಿರ್ವಹಣೆ ಮಾಡಲಾಗುತ್ತಿದೆ. ಸದರಿ ಘಟಕಗಳ ನಿರ್ವಹಣೆಗೆ ಮಾಸಿಕ ರೂ.3,000/- ದಂತೆ ಅನುದಾನ ನೀಡಲಾಗುತ್ತಿದೆ. |

RDWSD/CE/TECH/126 /2025-26

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಮಾಹಿತಿ
ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು